ಇ) ಮೇಲಿನ ಪ್ರಸ್ತಾವನೆಯನ್ನು ಪರಿಗಣಿಸಿ ಶೀಘ್ರವಾಗಿ ಸೂಕ್ತ ಆದೇಶ ಹೊರಡಿಸಿ ನೌಕರರ ಹಿತ ಕಾಪಾಡಲು ಕ್ರಮ ಕೈಗೊಳ್ಳಲಾಗುವುದೇ;

ವಿ.ಎಸ್. ಕೌಜಲಗಿ (ಕೃಷಿ ಸಚಿವರು)

ಅ) ಕೃಷಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಬಡ್ತಿಯಿಂದ ಶೇಕಡ 50ರಷ್ಟು ಮತ್ತು ನೇರ ನೇಮಕಾತಿಯಿಂದ ಶೇಕಡ 50 ರಷ್ಟು ತುಂಬಲು ಅವಕಾಶವಿದೆ. ಆದರೆ, ಕೃಷಿ ಇಲಾಖೆಯಲ್ಲಿ ನೇರ ನೇಮಕಾತಿ ಹುದ್ದೆಗಳನ್ನು ಮುಂಬಡ್ತಿ ಹುದ್ದೆಗಳನ್ನಾಗಿ ಪರಿವರ್ತಿಸಿಕೊಳ್ಳದೆ ಅನುಪಾತಕ್ಕಿಂತ ಹೆಚ್ಚಾಗಿ ನೇರ ನೇಮಕಾತಿ ಹುದ್ದೆಗಳನ್ನು ಬಡ್ತಿಯಿಂದ ತುಂಬಿರುವುದರಿಂದ ಅವರನ್ನು ಹೆಚ್ಚುವರಿ ಪಟ್ಟಿಯಲ್ಲಿ ತೋರಿಸಲಾಗಿದೆ.

ಆ) ಸರ್ಕಾರದ ಸುತ್ತೋಲೆ ಸಂಖ್ಯೆ : ಸಿಆಸುಇ 78 ಸೇಸಿಇ 2002, ದಿನಾಂಕ: 30–8–2002ರ ಪ್ರಕಾರ ರಿಕ್ತ ಸ್ಥಾನಗಳನ್ನು ನೇರ ನೇಮಕಾತಿಯಿಂದಲೇ ತುಂಬಬೇಕೆಂದು ಆದೇಶವಿರುವುದರಿಂದ ಇತ್ಯರ್ಥಗೊಂಡಿರುವುದಿಲ್ಲ.

ಇ) ಪರಿಶೀಲಿಸಲಾಗುತ್ತಿದೆ

ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ನೌಕರರ ವರ್ಗಾವಣೆ ಕುರಿತು

553 (4841) : ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದ ಡಿ.ಸಿ.ಸಿ. ಬ್ಯಾಂಕ್‌ಗಳ ಅಂತರ ಜಿಲ್ಲಾ ವರ್ಗಾವಣೆಗೆ ತೆಗೆದುಕೊಂಡಿರುವ ಕ್ರಮವೇನು? ಇದನ್ನು ಯಾವಾಗ ಜಾರಿಗೊಳಿಸಲಾಗುವುದು? ಜಾರಿಗೊಳಿಸಲು ಇರುವ ತೊಂದರೆಗಳೇನು?

ಆ) ವರ್ಗಾವಣೆ ನೀತಿ ಅನುಸರಿಸುವುದರಿಂದ ಈ ಸಹಕಾರ ಕ್ಷೇತ್ರದಲ್ಲಿ ಶಿಸ್ತನ್ನು ಮೂಡಿಸಲು ಸಹಕಾರಿಯಾಗಿ ಬಾಕಿ ವಸೂಲಾತಿ ಹೆಚ್ಚಾಗಲು ಅವಕಾಶವಾಗುತ್ತದೆ. ಎಂದು ಹೇಳಿಕೆ ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ನಿಯಮಕ್ಕನುಗುಣವಾಗಿ ಅಂತರ ವರ್ಗಾವಣೆ ನೀತಿ ಜಾರಿಗೆ ತರಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಹೆಚ್. ವಿಶ್ವನಾಥ್ (ಸಹಕಾರ ಸಚಿವರು)

ಅ) ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳ ನೌಕರರ ವರ್ಗಾವಣೆಯ ಅಧಿಕಾರ ಆಯಾ ಬ್ಯಾಂಕಿನ ಆಡಳಿತ ಮಂಡಳಿಯ ಅಧೀನಕ್ಕೆ ಒಳಪಟ್ಟಿರುತ್ತದೆ, ಕೆಂದ್ರ ಸಹಕಾರ ಬ್ಯಾಂಕುಗಳ ನೌಕರರ ಅಂತರ್ ಜಿಲ್ಲಾ ವರ್ಗಾವಣೆಯ ಸಂಬಂಧ ಯಾವುದೇ ಪ್ರಸ್ತಾಪ ಸರ್ಕಾರದ ಮುಂದೆ ಇರುವುದಿಲ್ಲ. ಆದ್ದರಿಂದ ಅದನ್ನು ಜಾರಿಗೊಳಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) ಇಲ್ಲ

ಇ) ಉದ್ಭವಿಸುವುದಿಲ್ಲ.

ಕಾರ್ಕಳ ಜಾಗೂ ಉಡುಪಿ ಜಿಲ್ಲೆಗಳಲ್ಲಿನ ಅಂಗನವಾಡಿಗಳಿಗೆ ಸ್ವಂತ ಕಟ್ಟಡ ಒದಗಿಸುವುದು

556 (4835) : ಶ್ರೀ ಗೋಪಾಲ ಭಂಡಾರಿ ಹೆಚ್. (ಕಾರ್ಕಳ) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?